ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ
*ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ*
ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001

ಸಂಖ್ಯೆ: ವಾಇ : ಸುಮಪ : ಪ ಪ್ರ : 2014–15 : ಆಗಸ್ಟ್ 20 , 2014

ಪತ್ರಿಕಾ ಪ್ರಕಟಣೆ

# ಯೋಗ ಗುರು ಬಿ ಕೆ ಎಸ್ ಅಯ್ಯಂಗಾರ್ ಅವರ ನಿಧನಕ್ಕೆ ಮುಖ್ಯಮಂತ್ರಿ ಶೋಕ

**ಬೆಂಗಳೂರು, ಆಗಸ್ಟ್ 20 (ಕರ್ನಾಟಕ ವಾರ್ತೆ) :**

ಯೋಗ ಗುರು ಶ್ರೀ ಬೆಳ್ಳೂರು ಕೃಷ್ಣಮಾಚಾರ್ ಸುಂದರರಾಜ ಅಯ್ಯಂಗಾರ್ ಅವರ ನಿಧನಕ್ಕೆ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ತೀವ್ರ ಶೋಕ ವ್ಯಕ್ತಪಡಿಸಿದ್ದಾರೆ.

ಸಿರಿವಂತ ಭಾರತೀಯ ಪರಂಪರೆಯ ಪ್ರತೀಕವಾದ ಯೋಗವನ್ನು ಪಾಶ್ಚಮಾತ್ಯ ರಾಷ್ಟ್ರಗಳಲ್ಲಿ ಪರಿಚಯಿಸಿ ಯೋಗಕ್ಕೆ ಅಂತಾರಾಷ್ಟ್ರೀಯ ಸ್ಥಾನ ದೊರಕಿಸಿಕೊಟ್ಟ ಶ್ರೀ ಬಿ ಕೆ ಎಸ್ ಅಯ್ಯಂಗಾರ್ ಅವರು ಯೋಗ ಕ್ಷೇತ್ರದ ಧೃವತಾರೆ ಎನಿಸಿದ್ದರು.

ಯೋಗ ಕುರಿತು ಹಲವಾರು ಕೃತಿಗಳನ್ನು ರಚಿಸಿ ಬೆಳಕು ಚೆಲ್ಲಿರುವ ಶ್ರೀ ಅಯ್ಯಂಗಾರ್ ಅವರು ಯೋಗ ಎಂಬುದು ಕೇವಲ ವ್ಯಾಯಾಮವಲ್ಲ. ದೈಹಿಕ ಹಾಗೂ ಮಾನಸಿಕ ಆರೋಗ್ಯ ಕಾಯ್ದುಕೊಳ್ಳಲು ಅದು ಅತ್ಯುತ್ತಮ ವೈಜ್ಞಾನಿಕ ವಿಧಾನ ಎಂದು ಪ್ರತಿಪಾದಿಸಿ, ಯೋಗ ಕ್ಷೇತ್ರದ ವಿಶೇಷ ರಾಯಭಾರಿಯಾಗಿದ್ದರು ಎಂದು ಶ್ರೀ ಸಿದ್ದರಾಮಯ್ಯ ಅವರು ತಮ್ಮ ಸಂದೇಶದಲ್ಲಿ ಬಣ್ಣಿಸಿದ್ದಾರೆ.

*************

ಡಿ ಪಿ ಎಂ